**All India Radio: Bangalore**
**National Bulletin In Kannada**
**17.01.2026 1.10 p.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
**17.01.2026 1.10 p.m.**
**<><><><>**

ಮುಖ್ಯಾಂಶಗಳು

1. ಹೌರಾ - ಗುವಾಹಟಿ ನಡುವಿನ ದೇಶದ ಮೊಟ್ಟ ಮೊದಲ ವಂದೇ ಭಾರತ್ ಸ್ಲೀಪರ್ ರೈಲಿಗೆ ಇಂದು ಪ್ರಧಾನಿ ನರೇಂದ್ರ ಮೋದಿ ಹಸಿರು ನಿಶಾನೆ
2. ಮಹಾರಾಷ್ಟ್ರ ಸ್ಥಳೀಯ ಸಂಸ್ಥೆಗಳ ಚುನಾವಣೆ; ಒಂದು ಸಾವಿರದ ೪೨೬ ಸ್ಥಾನಗಳನ್ನು ಗೆಲ್ಲುವ ಮೂಲಕ ಬಿಜೆಪಿ ಜಯಭೇರಿ
3. ಇರಾನ್ ಪ್ರತಿಭಟನೆ; ಮೃತಪಟ್ಟ ಪ್ರತಿಭಟನಾಕಾರರ ಸಂಖ್ಯೆ ೩ ಸಾವಿರದ ೯೦ಕ್ಕೆ ಏರಿಕೆ
4. ಡಬ್ಲ್ಯೂಪಿಎಲ್ ಟಿ-೨೦ ಕ್ರಿಕೆಟ್; ೧೧ನೇ ಪಂದ್ಯದಲ್ಲಿಂದು ರಾಯಲ್ ಚಾಲೆಂಜರ್ಸ್ ಬೆಂಗಳೂರು - ಡೆಲ್ಲಿ ಕ್ಯಾಪಿಟಲ್ಸ್ ಮುಖಾಮುಖಿ
5. ಹತ್ತೊಂಬತ್ತು ವರ್ಷದೊಳಗಿನವರ ಏಕದಿನ ಕ್ರಿಕೆಟ್; ಮಳೆಯ ಕಾರಣ ಭಾರತ - ಬಾಂಗ್ಲಾದೇಶ ಪಂದ್ಯ ವಿಳಂಬ

<><><><>

ಪಶ್ಚಿಮ ಬಂಗಾಳದ ಮಾಲ್ಡಾ ನಗರ ರೈಲು ನಿಲ್ದಾಣದಲ್ಲಿಂದು ಹೌರಾ ಮತ್ತು ಗುವಾಹಟಿಯ ಕಾಮಾಕ್ಯ ನಡುವಿನ ದೇಶದ ಮೊಟ್ಟಮೊದಲ 'ವಂದೇ ಭಾರತ್ ಸ್ಲೀಪರ್' ರೈಲು ಸಂಚಾರಕ್ಕೆ ಪ್ರಧಾನಿ ನರೇಂದ್ರ ಮೋದಿ ಹಸಿರು ನಿಶಾನೆ ತೋರಿಸಲಿದ್ದಾರೆ. ದೇಶದಲ್ಲಿ ಹೆಚ್ಚುತ್ತಿರುವ ಆಧುನಿಕ ಸಾರಿಗೆ ಅಗತ್ಯವನ್ನು ಪೂರೈಸಲು ಅಭಿವೃದ್ಧಿಪಡಿಸಲಾಗಿರುವ 'ವಂದೇ ಭಾರತ್ ಸ್ಲೀಪರ್' ರೈಲು ಸಂಪೂರ್ಣ ಹವಾನಿಯಂತ್ರಿತವಾಗಿದೆ. ಇದು ಪ್ರಯಾಣಿಕರಿಗೆ ಮಿತ ವೆಚ್ಚದಲ್ಲಿ ವಿಮಾನ ಪ್ರಯಾಣದಂತಹ ಅನುಭವ ನೀಡುತ್ತದೆ. ಈ ರೈಲು, ದೂರದ ಪ್ರಯಾಣವನ್ನು ವೇಗವಾಗಿ ಸುರಕ್ಷಿತವಾಗಿ ಹಾಗೂ ಹೆಚ್ಚು ಅನುಕೂಲಕರವಾಗಿಸುತ್ತದೆ. ಬಳಿಕ ಪ್ರಧಾನಿ ಅವರು, ಮಾಲ್ಡಾದಲ್ಲಿ ನಡೆಯಲಿರುವ ಸಾರ್ವಜನಿಕ ಸಮಾರಂಭದಲ್ಲಿ ೩ ಸಾವಿರ ೨೫೦ ಕೋಟಿ ರೂಪಾಯಿಗೂ ಅಧಿಕ ವೆಚ್ಚದ ವಿವಿಧ ರೈಲ್ವೆ ಮತ್ತು ರಸ್ತೆ ಮೂಲಸೌಕರ್ಯ ಯೋಜನೆಗಳಿಗೆ ಶಂಕುಸ್ಥಾಪನೆ

ನೆರವೇರಿಸಲಿದ್ದಾರೆ. ಇದಲ್ಲದೆ, ಪಶ್ಚಿಮ ಬಂಗಾಳದ ನಾಲ್ಕು ಬೃಹತ್ ರೈಲ್ವೆ ಯೋಜನೆಗಳಿಗೂ ಶಿಲಾನ್ಯಾಸ ನೆರವೇರಿಸಲಿದ್ದಾರೆ. ಬಲೂರ್ ಘಾಟ್ ಮತ್ತು ಹಿಲಿ ನಡುವಿನ ಹೊಸ ರೈಲು ಮಾರ್ಗ ನ್ಯೂ ಜಲಪಾಯಿಗುರಿಯಲ್ಲಿ ಮುಂದಿನ ತಲೆಮಾರಿನ ಸಾಗಾಟ ನಿರ್ವಹಣಾ ವ್ಯವಸ್ಥೆ ಸಿಲಿಗುರಿ ಲೋಕೋಶೆಡ್‌ನ ಮೇಲ್ದರ್ಜೆಗೇರಿಸುವ ಕೆಲಸ ಹಾಗೂ ಜಲಪಾಯಿಗುರಿ ಜಿಲ್ಲೆಯಲ್ಲಿ ವಂದೇ ಭಾರತ್ ರೈಲು ನಿರ್ವಹಣಾ ಸೌಕರ್ಯದ ಆಧುನೀಕರಣದ ಕಾಮಗಾರಿ ಇವುಗಳಲ್ಲಿ ಸೇರಿವೆ. ಈ ಸೌಕರ್ಯಗಳು ಉತ್ತರ ಬಂಗಾಳದ ಪ್ರದೇಶದಲ್ಲಿ ಪ್ರಯಾಣಿಕ ಹಾಗೂ ಸರಕು ಸಾಗಾಟ ವ್ಯವಸ್ಥೆಯನ್ನು ಬಲಪಡಿಸಲಿದ್ದು, ಉದ್ಯೋಗ ಅವಕಾಶವನ್ನು ಸೃಷ್ಟಿಸಲಿವೆ. ಪ್ರಧಾನಿ ಅವರು ಇದೇ ಸಂದರ್ಭದಲ್ಲಿ ಮಾಲ್ಡಾದಿಂದ ನಾಲ್ಕು ಹೊಸ ಅಮೃತ್ ಭಾರತ್ ಎಕ್ಸ್‌ಪ್ರೆಸ್ ರೈಲುಗಳ ಸಂಚಾರಕ್ಕೂ ವರ್ಚುವಲ್ ಮೂಲಕ ಹಸಿರು ನಿಶಾನೆ ತೋರಿಸಲಿದ್ದಾರೆ. ಬಳಿಕ ಪ್ರಧಾನಿ ಅವರು, ಅಸ್ಸಾಂ ಗುವಾಹಟಿಯಲ್ಲಿ ಬೋಡೊ ಸಮುದಾಯದ ಶ್ರೀಮಂತ ಪರಂಪರೆಯನ್ನು ಬಿಂಬಿಸುವ ಬಗುರಂಬಾ ದ್ವೋಹವ್-೨೦೨೬ ಸಾಂಸ್ಕೃತಿಕ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ. ಕಾರ್ಯಕ್ರಮದಲ್ಲಿ ಬೋಡೋ ಸಮುದಾಯದ ೧೦ ಸಾವಿರಕ್ಕೂ ಅಧಿಕ ಕಲಾವಿದರು ಬಗುರಂಬಾ ನೃತ್ಯವನ್ನು ಸಾದರಪಡಿಸಲಿದ್ದಾರೆ. ಪ್ರಧಾನಿ ಅವರು ತಮ್ಮ ಎರಡನೇ ದಿವಸದ ಕಾರ್ಯಕ್ರಮದಲ್ಲಿ ಅಸ್ಸಾಂನ ಕಾಲಿಯಾಬೊರ್‌ನಲ್ಲಿ ಸುಮಾರು ೬ ಸಾವಿರದ ೯೫೦ ಕೋಟಿ ರೂಪಾಯಿ ವೆಚ್ಚದಲ್ಲಿ ನಿರ್ಮಿಸಲಾಗುವ ಕಾಜಿರಂಗ ಮೇಲು ಕಾರಿಡಾರ್ ಯೋಜನೆಗೆ ಭೂಮಿ ಪೂಜೆ ನೆರವೇರಿಸಲಿದ್ದಾರೆ.

<><><><>

ಮಹಾರಾಷ್ಟ್ರದಲ್ಲಿ ನಡೆದ ೨೯ ಮುನಿಸಿಪಲ್ ಕಾರ್ಪೊರೇಷನ್ ಚುನಾವಣೆಯ ೨ ಸಾವಿರದ ೮೬೯ ಸ್ಥಾನಗಳ ಪೈಕಿ ಒಂದು ಸಾವಿರದ ೪೨೫ ಸ್ಥಾನಗಳನ್ನು ಗೆಲ್ಲುವ ಮೂಲಕ ಬಿಜೆಪಿ ಜಯಭೇರಿ ಬಾರಿಸಿದೆ. ಅಂತಿಮ ಫಲಿತಾಂಶದ ಪ್ರಕಾರ ಏಕನಾಥ್ ಶಿಂಧೆ ನೇತೃತ್ವದ ಶಿವಸೇನೆ ೩೯೯ ಸ್ಥಾನಗಳು, ಕಾಂಗ್ರೆಸ್ ೩೨೪, ಅಜಿತ್ ಪವಾರ್ ನೇತೃತ್ವದ ಎನ್‌ಸಿಪಿ ೧೬೭, ಉದ್ಧವ್ ಠಾಕ್ರೆ ಬಣದ ಶಿವಸೇನೆ ೧೫೫, ಶರದ್ ಪವಾರ್ ನೇತೃತ್ವದ ಎನ್‌ಸಿಪಿ ೩೬, ಎಂಎನ್‌ಎಸ್ ೧೩ ಮತ್ತು ಬಿಎಸ್‌ಪಿ ೬ ಸ್ಥಾನಗಳಲ್ಲಿ ಗೆಲುವು ಸಾಧಿಸಿದೆ. ಏಷ್ಯಾದ ಅತ್ಯಂತ ಶ್ರೀಮಂತ ಪಾಲಿಕೆಯಾದ ಬೃಹನ್ ಮುಂಬೈ ಮಹಾನಗರ ಪಾಲಿಕೆ ಚುನಾವಣೆಯಲ್ಲಿ ಬಿಜೆಪಿ ಮತ್ತು ಏಕನಾಥ್ ಶಿಂಧೆ

ನೇತೃತ್ವದ ಶಿವಸೇನೆ ಮೈತ್ರಿಕೂಟ ೨೨೭ ಸ್ಥಾನಗಳ ಪೈಕಿ ೧೧೮ ಸ್ಥಾನಗಳನ್ನು ಗೆಲ್ಲುವ ಮೂಲಕ ಸ್ಪಷ್ಟ ಬಹುಮತ ಗಳಿಸಿದೆ.

<><><><>

ಇರಾನ್‌ನಲ್ಲಿ ಪ್ರತಿಭಟನೆಗಳ ವಿರುದ್ಧದ ದಮನ ಕಾರ್ಯಾಚರಣೆಯಲ್ಲಿ ಮೃತಪಟ್ಟವರ ಸಂಖ್ಯೆ ೩ ಸಾವಿರದ ೯೦ಕ್ಕೆ ಏರಿಕೆಯಾಗಿದೆ. ದೇಶದಲ್ಲಿ ಪರಿಸ್ಥಿತಿ ಸಹಜಸ್ಥಿತಿಗೆ ಮರಳುವ ಯಾವುದೇ ಲಕ್ಷಣಗಳು ಗೋಚರಿಸುತ್ತಿಲ್ಲ. ಇನ್ನೊಂದೆಡೆ ತೆಹ್ರಾನ್‌ನಲ್ಲಿ ಅಂಗಡಿಗಳು ಮತ್ತೆ ತೆರೆದಿವೆ. ಆದರೆ ಒಂದು ವಾರದ ಕಾಲ ಇಂಟರ್‌ನೆಟ್ ಸಂಪರ್ಕ ಕಡಿತ ಮುಂದುವರಿದಿದೆ. ಆತಂಕದ ಪರಿಸ್ಥಿತಿಯ ನಡುವೆಯೂ ಇರಾನ್ ಸರ್ವೋಚ್ಚ ನಾಯಕ ಆಯಾತುಲ್ಲಾ ಅಹಮದ್ ಖಮೇನಿ, ಬಂಧಿತ ಪ್ರತಿಭಟನಾಕಾರರಿಗೆ ಮರಣದಂಡನೆ ವಿಧಿಸಬೇಕು ಎಂದು ಕರೆ ನೀಡಿದರು. ಜೊತೆಗೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್‌ಗೆ ಬೆದರಿಕೆ ಹಾಕಿದರು. ಆದರೆ ಇರಾನ್ ವಿದೇಶಾಂಗ ಸಚಿವಾಲಯ, ನೂರಾರು ಪ್ರತಿಭಟನಾಕಾರರಿಗೆ ವಿಧಿಸಿದ್ದ ಮರಣದಂಡನೆ ಶಿಕ್ಷೆಯನ್ನು ರದ್ದುಗೊಳಿಸಲಾಗಿದೆ ಎಂದು ತಿಳಿಸಿದೆ. ಇದಕ್ಕಾಗಿ ಇರಾನ್ ನಾಯಕರಿಗೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಧನ್ಯವಾದ ಸಲ್ಲಿಸಿದ್ದಾರೆ. ಏತನ್ಮಧ್ಯೆ ಗಡಿ ಪಾರಾಗಿರುವ ರಾಜಕುಮಾರ ರೇಜಾ ಪೆಹ್ಲವಿ, ಇರಾನಿನ ಪ್ರಜೆಗಳು ಪ್ರತಿಭಟನೆ ಮುಂದುವರಿಸುವಂತೆ ಕರೆ ನೀಡಿದರು. ಅಲ್ಲದೆ ಹಾಲಿ ಸರ್ಕಾರ ಪತನಗೊಂಡರೆ ಇರಾನ್‌ಗೆ ಮರಳುವುದಾಗಿ ಭರವಸೆ ನೀಡಿದರು. ಆರ್ಥಿಕ ಸಂಕಷ್ಟ ಮತ್ತು ಹಣದುಬ್ಬರದಿಂದ ಸಂಕಷ್ಟದಲ್ಲಿರುವ ಇರಾನ್‌ನ ಪ್ರಜೆಗಳು ಕಳೆದ ಡಿಸೆಂಬರ್ ೨೮ರಿಂದ ಪ್ರತಿಭಟನೆ ನಡೆಸುತ್ತಿದ್ದಾರೆ. ಪ್ರತಿಭಟನೆಗಳಲ್ಲಿ ಇದುವರೆಗೆ ೩೫೦ ಮಸೀದಿಗಳು, ೧೨೬ ಪ್ರಾರ್ಥನಾ ಕೇಂದ್ರಗಳು, ೪೦೦ ಆಸ್ಪತ್ರೆಗಳು, ೧೦೬ ಆಂಬುಲೆನ್ಸ್‌ಗಳು ಮತ್ತು ೭೧ ಅಗ್ನಿಶಾಮಕ ವಾಹನಗಳಿಗೆ ಹಾನಿಯಾಗಿವೆ ಎಂದು ಸ್ಥಳೀಯ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ.

<><><><>

ಇರಾನ್‌ನಲ್ಲಿನ ಪ್ರಸ್ತುತ ಪರಿಸ್ಥಿತಿಯನ್ನು ಭಾರತ ಸೂಕ್ಷ್ಮವಾಗಿ ಗಮನಿಸುತ್ತಿದೆ ಎಂದು ವಿದೇಶಾಂಗ ಸಚಿವಾಲಯ ತಿಳಿಸಿದೆ. ನವದೆಹಲಿಯಲ್ಲಿ ಪತ್ರಿಕಾಗೋಷ್ಠಿ ಉದ್ದೇಶಿಸಿ ಮಾತನಾಡಿದ ವಿದೇಶಾಂಗ ಸಚಿವಾಲಯದ ವಕ್ತಾರ ರಣಧೀರ್ ಜೈಸ್ವಾಲ್, ಇತ್ತೀಚಿನ ದಿನಗಳಲ್ಲಿ ಇರಾನ್‌ನಲ್ಲಿನ ಪರಿಸ್ಥಿತಿಯನ್ನು ಪರಿಗಣಿಸಿ, ಭಾರತೀಯರು ಇರಾನ್‌ಗೆ ಭೇಟಿ ನೀಡುವುದನ್ನು ತಪ್ಪಿಸಲು ಸಚಿವಾಲಯವು ಕೆಲವು ಸಲಹೆಗಳನ್ನು ನೀಡಿದೆ. ಅಲ್ಲದೆ ಇರಾನ್‌ನಲ್ಲಿರುವವರು ಭಾರತಕ್ಕೆ

ಹಿಂತಿರುಗುವಂತೆ ಸೂಚಿಸಲಾಗಿದೆ ಎಂದು ಹೇಳಿದರು.  ಇನ್ನೊಂದೆಡೆ, ಚಬಹಾರ್ ಬಂದರಿನಿ ಕುರಿತು ಒಪ್ಪಂದವನ್ನು ರೂಪಿಸುವಲ್ಲಿ ಭಾರತವು, ಅಮೆರಿಕದೊಂದಿಗೆ ತೊಡಗಿಕೊಂಡಿದೆ ಎಂದು ಅವರು ತಿಳಿಸಿದರು. ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಅವರು, ನವದೆಹಲಿಯಲ್ಲಿ ಜಪಾನ್ ವಿದೇಶಾಂಗ ಸಚಿವ ತೋಶಿಮಿಟ್ಸು ಮೊಟೆಗಿ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು.  ಭಾರತ - ಜಪಾನ್ ಸಹಯೋಗದ ಪ್ರಮುಖ ಅಂಶಗಳ ಕುರಿತು ಉಭಯ ನಾಯಕರು ಚರ್ಚಿಸಿದರು. ನಂತರ ಉಭಯ ನಾಯಕರು ೧೮ನೇ ಭಾರತ - ಜಪಾನ್ ಕಾರ್ಯತಂತ್ರದ ಸಂವಾದದಲ್ಲಿ ಭಾಗವಹಿಸಿದ್ದರು ಎಂದು ರಣದೀರ್ ಜೈಸ್ವಾಲ್ ತಿಳಿಸಿದರು.

<><><>

ಪೋಲೆಂಡ್ ಉಪ ಪ್ರಧಾನಿ ಮತ್ತು ವಿದೇಶಾಂಗ ಸಚಿವ ರಾಡೊಸ್ಲಾವ್ ಸಿಕೋರ್ಸ್ಕಿ ಇಂದಿನಿಂದ ಮೂರು ದಿನಗಳ ಭಾರತ ಭೇಟಿಯಲ್ಲಿದ್ದಾರೆ. ನಾಳೆ ಅವರು, ರಾಜಸ್ತಾನದ ಜೈಪುರದಲ್ಲಿ ನಡೆಯಲಿರುವ ಜೈಪುರ ಸಾಹಿತ್ಯ ಉತ್ಸವದಲ್ಲಿ ಭಾಗವಹಿಸಲಿದ್ದಾರೆ. ಸೋಮವಾರ ಅವರು ನವದೆಹಲಿಯಲ್ಲಿ ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಲಿದ್ದಾರೆ.

<><><>

ಚತ್ತೀಸ್‌ಗಢದ ಬಿಜಾಪುರ ಜಿಲ್ಲೆಯಲ್ಲಿ ಇಂದು ಭದ್ರತಾ ಪಡೆಗಳು ನಡೆಸಿದ ಕಾರ್ಯಾಚರಣೆಯಲ್ಲಿ ಇಬ್ಬರು ಮಾವೋವಾದಿಗಳು ಹತರಾಗಿದ್ದಾರೆ.  ಜಿಲ್ಲೆಯ ವಾಯುವ್ಯ ಪ್ರದೇಶದ ಕಾಡಿನಲ್ಲಿ ಮಾವೋವಾದಿಗಳು ಅಡಗಿರುವ ಕುರಿತು ಖಚಿತ ಗುಪ್ತಚರ ಮಾಹಿತಿ ಮೇರೆಗೆ ಭದ್ರತಾ ಪಡೆಗಳ ಜಂಟಿ ತಂಡ ನಿನ್ನೆ ಕಾರ್ಯಾಚರಣೆ ಆರಂಭಿಸಿತು. ಇಂದು ಬೆಳಗ್ಗೆ ಶೋಧ ಕಾರ್ಯಾಚರಣೆ ಸಮಯದಲ್ಲಿ ಮಾವೋವಾದಿಗಳು ಮತ್ತು ಭದ್ರತಾ ಪಡೆಗಳ ನಡುವೆ ಗುಂಡಿನ ಚಕಮಕಿ ನಡೆದಿದೆ. ಸ್ಥಳದಿಂದ ಇಬ್ಬರು ಮಾವೋವಾದಿಗಳ ಶವವನ್ನು ವಶಪಡಿಸಿಕೊಳ್ಳಲಾಗಿದೆ. ಪ್ರದೇಶದಲ್ಲಿ ಇತರ ಮಾವೋವಾದಿಗಳಿಗಾಗಿ ಶೋಧ ಕಾರ್ಯಾಚರಣೆ ಮುಂದುವರಿದಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

<><><>

ನವಿಮುಂಬೈನ ಡಾ. ಡಿ.ವೈ. ಪಾಟೀಲ್ ಸ್ಪೋರ್ಟ್ಸ್ ಅಕಾಡೆಮಿ ಕ್ರಿಕೆಟ್ ಕ್ರೀಡಾಂಗಣದಲ್ಲಿಂದು ನಡೆಯಲಿರುವ ಮಹಿಳಾ ಪ್ರೀಮಿಯರ್ ಲೀಗ್ - ಡಬ್ಲ್ಯೂಪಿಎಲ್ ಟಿ-೨೦ ಕ್ರಿಕೆಟ್ ಪಂದ್ಯಾವಳಿಯ

೧೦ನೇ ಪಂದ್ಯದಲ್ಲಿ ಯುಪಿ ವಾರಿಯರ್ಸ್ ಮತ್ತು ಮುಂಬೈ ಇಂಡಿಯನ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ಮಧ್ಯಾಹ್ನ ೩ ಗಂಟೆಗೆ ಆರಂಭವಾಗಲಿದೆ. ಇದೇ ಕ್ರೀಡಾಂಗಣದಲ್ಲಿಂದು ನಡೆಯುವ ಮತ್ತೊಂದು ಪಂದ್ಯದಲ್ಲಿ ರಾಯಲ್ ಚಾಲೆಂಜರ್ಸ್ ಬೆಂಗಳೂರು - ಆರ್‌ಸಿಬಿ ಮತ್ತು ಡೆಲ್ಲಿ ಕ್ಯಾಪಿಟಲ್ಸ್ ತಂಡಗಳು ಮುಖಾಮುಖಿಯಾಗಲಿವೆ. ಪಂದ್ಯ ರಾತ್ರಿ ೭.೩೦ಕ್ಕೆ ಆರಂಭವಾಗಲಿದೆ.

<><><><>

ಜಿಂಬಾಬ್ವೆಯ ಬುಲಾವಾಯೋದಲ್ಲಿ ಇಂದು ನಡೆಯಲಿರುವ ೧೯ ವರ್ಷದೊಳಗಿನ ಪುರುಷರ ಏಕದಿನ ವಿಶ್ವಕಪ್ ಕ್ರಿಕೆಟ್ ಪಂದ್ಯಾವಳಿಯ ಎ ಗುಂಪಿನ ಎರಡನೇ ಪಂದ್ಯದಲ್ಲಿ ಭಾರತ, ಬಾಂಗ್ಲಾದೇಶ ತಂಡವನ್ನು ಎದುರಿಸಲಿದೆ. ಮಳೆಯ ಕಾರಣ ಟಾಸ್ ವಿಳಂಬವಾಗಿದೆ.

<><><><>

ಅಕ್ರಮ ಹಣ ವರ್ಗಾವಣೆ ತಡೆ ಕಾಯ್ದೆಯಡಿ ಅಲ್ ಫಲಾಹ್ ವಿಶ್ವವಿದ್ಯಾಲಯದ ವ್ಯವಸ್ಥಾಪಕ ಟ್ರಸ್ಟಿ ಮತ್ತು ಕುಲಪತಿ ಜಾವೇದ್ ಅಹಮದ್ ಸಿದ್ದಿಕಿ ವಿರುದ್ಧ ಜಾರಿ ನಿರ್ದೇಶನಾಲಯ ಪ್ರಾಸಿಕ್ಯೂಶನ್ ದೂರು ದಾಖಲಿಸಿದೆ. ಕಳೆದ ವರ್ಷ ದೆಹಲಿಯ ಕೆಂಪುಕೋಟೆ ಬಳಿ ನಡೆದ ಕಾರು ಸ್ಫೋಟಕ್ಕೆ ಸಂಬಂಧಿಸಿದಂತೆ ದೆಹಲಿ ಪೊಲೀಸರು ದಾಖಲಿಸಿರುವ ಎಫ್‌ಐಆರ್‌ಗಳನ್ನು ಆಧರಿಸಿ, ಇಡಿ ತನಿಖೆ ನಡೆಸುತ್ತಿದೆ. ಇದೇ ವೇಳೆ ಹರಿಯಾಣ ಮೂಲದ ಸಂಸ್ಥೆಗೆ ಸೇರಿದ ಸುಮಾರು ೧೪೦ ಕೋಟಿ ರೂಪಾಯಿ ಮೌಲ್ಯದ ಆಸ್ತಿಗಳನ್ನು ಮುಟ್ಟುಗೋಲು ಹಾಕಿಕೊಂಡಿರುವುದಾಗಿ ಇಡಿ ತಿಳಿಸಿದೆ.

<><><><>

ಇಂದು ತಮಿಳುನಾಡಿನ ಮಾಜಿ ಮುಖ್ಯಮಂತ್ರಿ ಮತ್ತು ನಟ ಎಂ.ಜಿ. ರಾಮಚಂದ್ರನ್ ಅವರ ಜನ್ಮದಿನ. ಈ ಹಿನ್ನೆಲೆಯಲ್ಲಿ ಅವರಿಗೆ ಉಪರಾಷ್ಟ್ರಪತಿ ಸಿ.ಪಿ. ರಾಧಾಕೃಷ್ಣನ್, ಪ್ರಧಾನಿ ನರೇಂದ್ರ ಮೋದಿ ಗೌರವ ಸಲ್ಲಿಸಿದ್ದಾರೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>